ಕರ್ನಾಟಕ ಸರ್ಕಾರ
(ಕೃಷಿ ಇಲಾಖೆ)

ಸಂ: ಉಕೃನಿ(ಕೃಯಾಂ&ಸೂನೀ)/LAQ-345/2024-25

ಕೃಷಿ ಆಯುಕ್ತರ ಕಾರ್ಯಾಲಯ,
ಶೇಷಾದ್ರಿ ರಸ್ತೆ, ಬೆಂಗಳೂರು-01,
ದಿನಾಂಕ: 19.07.2024

ರವರಿಗೆ,

ಸರ್ಕಾರದ ಕಾರ್ಯದರ್ಶಿಗಳು,
ಕೃಷಿ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ವಿಧಾನಸಭೆಯ ಸದಸ್ಯರಾದ ಶ್ರೀಮತಿ ಜೊಲ್ಲೆ ಶಶಿಕಲಾ ಅಣ್ಣಾಸಾಹೇಬ (ನಿಪ್ಪಾಣಿ) ಇವರು ಕೇಳಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 345 ಕ್ಕೆ ಉತ್ತರಿಸುವ ಕುರಿತು.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನಸಭೆಯ ಸದಸ್ಯರಾದ ಶ್ರೀಮತಿ ಜೊಲ್ಲೆ ಶಶಿಕಲಾ ಅಣ್ಣಾಸಾಹೇಬ (ನಿಪ್ಪಾಣಿ) ಇವರು ಕೇಳಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 345 ಕ್ಕೆ ಉತ್ತರಗಳನ್ನು ಸಿದ್ಧಪಡಿಸಿ ಈ ಪತ್ರದೊಂದಿಗೆ ಲಗತ್ತಿಸಿ ಸಲ್ಲಿಸಿದೆ.

ತಮ್ಮ ವಿಶ್ವಾಸಿ

ಕೃಷಿ ನಿರ್ದೇಶಕರು

ಕರ್ನಾಟಕ ವಿಧಾನಸಭೆ

ಪ್ರಶ್ನೆ ಸಂಖ್ಯೆ	ಎಲ್.ಎ.ಕ್ಯೂ. 345
ಸದಸ್ಯರ ಹೆಸರು	ಶ್ರೀಮತಿ. ಜೊಲ್ಲೆ ಶಶಿಕಲಾ ಅಣ್ಣಾಸಾಹೇಬ (ನಿಪ್ಪಾಣಿ)
ಉತ್ತರಿಸಬೇಕಾದ ದಿನಾಂಕ	24/07/2024
ಉತ್ತರಿಸುವ ಸಚಿವರು	ಮಾನ್ಯ ಕೃಷಿ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಕಬ್ಬು ಕಟಾವು ಯಂತ್ರ ಖರೀದಿಗೆ ಸಬ್ಸಿಡಿ ಅನುದಾನ ಬಿಡುಗಡೆ ಮಾಡಲಾಗಿದೆಯೇ;	ಕಬ್ಬು ಕಟಾವು ಯಂತ್ರ ಖರೀದಿಗೆ ಸಹಾಯಧನವನ್ನು ಒದಗಿಸಲು ಪ್ರತ್ಯೇಕವಾಗಿ ಅನುದಾನ ಬಿಡುಗಡೆ ಮಾಡಲಾಗಿರುವುದಿಲ್ಲ. ಆದಾಗ್ಯೂ, ಹೈಟೆಕ್ ಹಾರ್ವೆಸ್ಟರ್ ಹಬ್ ಯೋಜನೆಯಡಿ ಕಬ್ಬು ಕಟಾವು ಯಂತ್ರ ಖರೀದಿಗೆ ಸಹಾಯಧನ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.
ಆ)	ಸಬ್ಸಿಡಿ ಅನುದಾನ ಬಿಡುಗಡೆ ಮಾಡದೇ ಇರುವುದರಿಂದ ರೈತರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.
ಇ)	ನಿಪ್ಪಾಣಿ ತಾಲ್ಲೂಕಿನಲ್ಲಿ ಇಲ್ಲಿಯವರೆಗೆ ಎಷ್ಟು ಕಬ್ಬು ಕಟಾವು ಯಂತ್ರಗಳನ್ನು ನೀಡಲಾಗಿದೆ; ಹಾಗೂ ಸಬ್ಸಿಡಿ ಅನುದಾನ ಬಿಡುಗಡೆ ಮಾಡಲಾಗಿದೆ; (ವಿವರ ನೀಡುವುದು)	ನಿಪ್ಪಾಣಿ ತಾಲ್ಲೂಕಿನಲ್ಲಿ ಇಲ್ಲಿಯವರೆಗೆ 7 ಕಬ್ಬು ಕಟಾವು ಯಂತ್ರಗಳಿಗೆ ರೂ.248.88 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ. ವಿವರ ಈ ಕೆಳಕಂಡಂತಿದೆ: (see table below)

ಕ್ರ. ಸಂ	ವರ್ಷ	ಕಬ್ಬು ಕಟಾವು ಯಂತ್ರಗಳ ಸಂಖ್ಯೆ	ಸಬ್ಸಿಡಿ ಅನುದಾನ (ಲಕ್ಷ ರೂ)
1	2017-18	4	140.00
2	2018-19	2	70.00
3	2023-24	1	38.88
ಒಟ್ಟು		**7**	**248.88**

ಕ್ರ.ಸಂ.	ಪ್ರಶ್ನೆ	ಉತ್ತರ
ಈ)	ನಿಪ್ಪಾಣಿ ಮತಕ್ಷೇತ್ರದ ಕೆಲವು ಗ್ರಾಮಗಳ ವ್ಯಾಪ್ತಿಯ ಚಿಕ್ಕೋಡಿ ತಾಲ್ಲೂಕಿನ ಸದಲಗಾ ರೈತ ಸಂಪರ್ಕ ಕೇಂದ್ರದ ವ್ಯಾಪ್ತಿಯಲ್ಲಿ ಎಷ್ಟು ಕಬ್ಬು ಕಟಾವು ಯಂತ್ರಗಳನ್ನು ನೀಡಲಾಗಿದೆ ಹಾಗೂ ಎಷ್ಟು ಸಬ್ಸಿಡಿ ಅನುದಾನ ಬಿಡುಗಡೆ ಮಾಡಲಾಗಿದೆ? (ವಿವರ ನೀಡುವುದು)	ನಿಪ್ಪಾಣಿ ಮತಕ್ಷೇತ್ರದ ವ್ಯಾಪ್ತಿಯ ಚಿಕ್ಕೋಡಿ ತಾಲ್ಲೂಕಿನ ಸದಲಗಾ ರೈತ ಸಂಪರ್ಕ ಕೇಂದ್ರದ ವ್ಯಾಪ್ತಿಯಲ್ಲಿ 5 ಕಬ್ಬು ಕಟಾವು ಯಂತ್ರಗಳಿಗೆ ರೂ.175.00 ಲಕ್ಷಗಳ ಸಹಾಯಧನವನ್ನು ಬಿಡುಗಡೆ ಮಾಡಲಾಗಿದೆ.

ಕೃಷಿ ನಿರ್ದೇಶಕರು